# ಕರ್ನಾಟಕ ಸರ್ಕಾರ

ಪತ್ರ ಸಂಖ್ಯೆ: ಇಡಿ 73 ಟಿಇಸಿ 2015.

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:15.06.2015

**ಇವರಿಂದ:-**

ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ,
ಬೆಂಗಳೂರು.

**ಇವರಿಗೆ:-**

ಕಾರ್ಯನಿರ್ವಾಹಕ ನಿರ್ದೇಶಕರು,
ಕರ್ನಾಟಕ ಪರೀಕ್ಷಾ ಪ್ರಾಧಿಕಾರ,
18ನೇ ಅಡ್ಡರಸ್ತೆ, ಮಲ್ಲೇಶ್ವರಂ,
ಬೆಂಗಳೂರು.

ಮಾನ್ಯರೆ,

ವಿಷಯ:- ಖಾಸಗಿ ವಿಶ್ವವಿದ್ಯಾಲಯಗಳು ಸರ್ಕಾರಕ್ಕೆ ಬಿಟ್ಟುಕೊಡುವ ಸೀಟುಗಳಿಗೆ ಶುಲ್ಕ ನಿಗಧಿಪಡಿಸುವ ಬಗ್ಗೆ-

ಉಲ್ಲೇಖ:- ಸರ್ಕಾರದ ಸಮ ಸಂಖ್ಯೆ ಪತ್ರ ದಿನಾಂಕ:12-06-2015.

******

ಮೇಲ್ಕಂಡ ವಿಷಯ ಹಾಗೂ ಉಲ್ಲೇಖದ ಕಡೆಗೆ ತಮ್ಮ ಗಮನವನ್ನು ಸೆಳೆಯಲಾಗಿದೆ. ಉಲ್ಲೇಖದಲ್ಲಿ ನಮೂದಿಸಲಾಗಿರುವ ದಿನಾಂಕ:12-06-2015ರ ಸರ್ಕಾರದ ಪತ್ರವನ್ನು ಈ ಮೂಲಕ ಹಿಂಪಡೆಯಲಾಗಿದೆ. ಮುಂದುವರೆದು, ಖಾಸಗಿ ಮತ್ತು ಡೀಮ್ಡ್ ಟು ಬಿ ವಿಶ್ವವಿದ್ಯಾಲಯಗಳ ಕಾಯ್ದೆಯಲ್ಲಿನ ಅವಕಾಶದನ್ವಯ ಆಯಾ ಖಾಸಗಿ ವಿಶ್ವವಿದ್ಯಾಲಯಗಳು ಸರ್ಕಾರಕ್ಕೆ ಬಿಟ್ಟುಕೊಡುವ ಸೀಟುಗಳನ್ನು ಸರ್ಕಾರಿ ಸೀಟುಗಳೆಂದು ಪರಿಗಣಿಸಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಸೀಟು ಹಂಚಿಕೆ ಮಾಡಲಾಗುತ್ತದೆ. ಅದರಂತೆ, ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಹಂಚಿಕೆ ಮಾಡಲಾಗುವ ಸರ್ಕಾರಿ ಕೋಟಾ ಸೀಟುಗಳಿಗೆ ಸರ್ಕಾರ ನಿಗಧಿಪಡಿಸಿರುವ ಶುಲ್ಕವನ್ನು ಪಾವತಿಸಿಕೊಳ್ಳಬೇಕಾಗಿರುವುದರಿಂದ ಎಲ್ಲಾ ಖಾಸಗಿ ಮತ್ತು ಡೀಮ್ಡ್ ಟು ಬಿ ವಿಶ್ವವಿದ್ಯಾಲಯಗಳು ಸರ್ಕಾರಕ್ಕೆ ಬಿಟ್ಟುಕೊಟ್ಟಿರುವ ಸೀಟುಗಳಿಗೆ ರೂ.45,000/-ಗಳ ಶುಲ್ಕವನ್ನು ವಿದ್ಯಾರ್ಥಿಗಳಿಂದ ಪಾವತಿಸಿಕೊಳ್ಳಲು ಅಗತ್ಯಕ್ರಮ ಕೈಗೊಳ್ಳುವಂತೆ ತಮ್ಮನ್ನು ಕೋರಲು ನಿರ್ದೇಶಿತನಾಗಿದ್ದೇನೆ.

ತಮ್ಮ ವಿಶ್ವಾಸಿ,

15/6/15

(ಬಿ.ನಾಗಭೂಷಣ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ).

15/6/15